ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS** 2

ಇಲಾಖೆ / ವಿಷಯ : DEPARTMENT / SUBJECT: ಸಮಾಜ ಕಲ್ಯಾಣ ಇಲಾಖೆ

ಪತ್ರಿಕೆಯ ಹೆಸರು : NAME OF THE NEWS PAPER: ಉದಯವಾಣಿ ದಿನಾಂಕ : DATE : 07/04/2020

# ದಿವ್ಯಾಂಗರ ಮೀಸಲಾತಿ ಶೇ.4ಕ್ಕೆ

## ಎ ಮತ್ತು ಬಿ ಸಮೂಹ ಹುದ್ದೆಗಳ ನೇಮಕಾತಿ

• ರಫೀಕ್ ಅಹ್ಮದ್

ಬೆಂಗಳೂರು: ಸರ್ಕಾರಿ ಹುದ್ದೆಗಳ ನೇರ ನೇಮಕಾತಿಗಳಲ್ಲಿ ದಿವ್ಯಾಂಗರಿಗೆ ಎ ಮತ್ತು ಬಿ ಸಮೂಹದ ಹುದ್ದೆಗಳ ಮೀಸಲಾತಿ ಪ್ರಮಾಣ ಹೆಚ್ಚಳ ಮಾಡಲಾಗಿದೆ.



ರಾಜ್ಯದ ಸಿವಿಲ್ ಸೇವೆಗಳಲ್ಲಿನ ಎ ಮತ್ತು ಬಿ ಸಮೂಹದ ಹುದ್ದೆಗಳಿಗೆ ಮಾಡುವ ನೇರ ನೇಮಕಾತಿಗಳಲ್ಲಿ ದಿವ್ಯಾಂಗ ಅಭ್ಯರ್ಥಿಗಳಿಗೆ ಹಿಂದೆ ಶೇ.3ರಷ್ಟು ಇದ್ದ ಮೀಸಲಾತಿ ಪ್ರಮಾಣವನ್ನು ಶೇ.4ಕ್ಕೆ ಹೆಚ್ಚಿಸಲು ರಾಜ್ಯ ಸರ್ಕಾರ ಅಂತಿಮ ಗೆಜೆಟ್ ಅಧಿಸೂಚನೆ ಹೊರಡಿಸಿದ್ದು ಇದರಿಂದ ಮೀಸಲಾತಿ ಹೆಚ್ಚಳವಾಗಬೇಕು ಎಂಬ ದಶಕದ ಹೋರಾಟಕ್ಕೆ ಜಯ ಸಿಕ್ಕಂತಾಗಿದೆ.

ಈ ಸಂಬಂಧ ಕರ್ನಾಟಕ ಸಿವಿಲ್ ಸೇವೆಗಳ (ಸಾಮಾನ್ಯ ನೇಮಕಾತಿ) ನಿಯಮಗಳು-1977 ಹಾಗೂ ದಿವ್ಯಾಂಗ ವ್ಯಕ್ತಿಗಳ ಹಕ್ಕುಗಳ ಕಾಯ್ದೆ-2016ರ ಮೀಸಲಾತಿ ಪ್ರಮಾಣ ಹಾಗೂ ದಿವ್ಯಾಂಗ ಪ್ರಮಾಣಕ್ಕೆ ಸಂಬಂಧಿಸಿದ ತಿದ್ದುಪಡಿಗಳನ್ನು ಸೇರಿಸಿ ಕರ್ನಾಟಕ ಸಿವಿಲ್ ಸೇವೆಗಳ (ಸಾಮಾನ್ಯ ನೇಮಕಾತಿ) (ತಿದ್ದುಪಡಿ) ನಿಯಮಗಳು-2020 ಅನ್ನು ರಾಜ್ಯಪತ್ರದಲ್ಲಿ ಪ್ರಕಟಿಸಲಾಗಿದೆ.

**ಮೀಸಲಾತಿ ಪ್ರಮಾಣ ಹೆಚ್ಚಿಸಿರುವುದು ಸ್ವಾಗತಾರ್ಹ. ಇದರಿಂದ ಸಿವಿಲ್ ಸೇವೆಗಳ ಉನ್ನತ ಹುದ್ದೆಗಳಲ್ಲಿ ದಿವ್ಯಾಂಗರಿಗೆ ಹೆಚ್ಚಿನ ಅವಕಾಶ ಸಿಗಲಿದೆ. ಅಲ್ಲದೇ, ದಿವ್ಯಾಂಗರ ಬಗೆಗಿನ ಸಮಾಜದ ಧೋರಣೆ ಸಹ ಬದಲಾಗಲಿದೆ.**

**• ವಿ.ಎಸ್. ಬಸವರಾಜು, ಆಯುಕ್ತರು, ಕರ್ನಾಟಕ ರಾಜ್ಯ ಅಂಗವಿಕಲ ಅಧಿನಿಯಮ**

ತಿದ್ದುಪಡಿ ಕರಡು ಅಧಿಸೂಚನೆಯನ್ನು ಆ.7ಕ್ಕೆ ಹೊರಡಿಸಿ, ಸಾರ್ವಜನಿಕರಿಂದ ಆಕ್ಷೇಪಣೆ ಸಲ್ಲಿಸಲು 15 ದಿನ ಕಾಲಾವಕಾಶ ನೀಡಲಾಗಿತ್ತು. ಕರಡಿನ ಬಗ್ಗೆ ಆಕ್ಷೇಪಣೆ ಅಥವಾ ಸಲಹೆಗಳನ್ನು ರಾಜ್ಯ ಸರ್ಕಾರದಲ್ಲಿ ಸ್ವೀಕೃತವಾಗಿರುವುದಿಲ್ಲ. ಆದ್ದರಿಂದ ತಿದ್ದುಪಡಿ ನಿಯಮ ರಚಿಸಿ ಅದನ್ನು ಆ.29ರ ರಾಜ್ಯಪತ್ರದಲ್ಲಿ ಪ್ರಕಟಿಸಲಾಗಿದೆ ಎಂದು ಅಧಿಕಾರಿಗಳು ಮಾಹಿತಿ ನೀಡಿದ್ದಾರೆ. ರಾಜ್ಯ ಸರ್ಕಾರಿ ಸೇವೆಗಳಲ್ಲಿ ನೇರ ನೇಮಕಾತಿಯಲ್ಲಿ ಮೀಸಲಾತಿ ಪ್ರಮಾಣ ಹಾಗೂ ಅದಕ್ಕಾಗಿ ಅನುಸರಿಸಬೇಕಾದ ರೋಸ್ಟರ್ ನಿಗದಿಪಡಿಸಿ 1995ರಲ್ಲಿ ಆದೇಶ ಹೊರಡಿಸಲಾಗಿತ್ತು.

▶ 7ನೇ ಪುಟಕ್ಕೆ

# ದಿವ್ಯಾಂಗರ ಮೀಸಲಾತಿ ಶೇ. 4ಕ್ಕೆ

1ನೇ ಪುಟದಿಂದ ▶ ಅದರಂತೆ, ಸಿ ಮತ್ತು ಡಿ ಸಮೂಹದ ಹುದ್ದೆಗಳ ನೇರ ನೇಮಕಾತಿಯಲ್ಲಿ ದಿವ್ಯಾಂಗರಿಗೆ ಶೇ.5ರಷ್ಟು ಸಮತಳ (ಹಾರಿಜಂಟಲ್) ಮೀಸಲಾತಿ ಕಲ್ಪಿಸಲಾಯಿತು.

ಬಳಿಕ 2005ರ ಅಧಿಸೂಚನೆಯಲ್ಲಿ ರಾಜ್ಯದ ಸಿವಿಲ್ ಸೇವೆಗಳಲ್ಲಿನ ಎ ಮತ್ತು ಬಿ ಸಮೂಹದ ಹುದ್ದೆಗಳ ನೇರ ನೇಮಕಾತಿಯಲ್ಲಿ ಅಂಗವಿಕಲರಿಗೆ ಶೇ.3ರಷ್ಟು ಸಮತಳ ಮೀಸಲಾತಿ ಕಲ್ಪಿಸಲಾಯಿತು. ಈ ಮೀಸಲಾತಿ ಪ್ರಮಾಣ ಹೆಚ್ಚಿಸಬೇಕು ಎಂಬ ಕೂಗು ಆಗಿನಿಂದಲೇ ಕೇಳಿ ಬರುತ್ತಿತ್ತು. ಅದಕ್ಕೆ ಈಗ ಕಾಲ ಕೂಡಿ ಬಂದಿದೆ. ತಿದ್ದುಪಡಿ ನಿಯಮಗಳ ರಚನೆ ಆಗಿರುವುದರಿಂದ ಇನ್ನು ಮುಂದೆ ಎ ಮತ್ತು ಬಿ ಹುದ್ದೆಗಳ ನೇಮಕಾತಿಯಲ್ಲಿ ದಿವ್ಯಾಂಗರಿಗೆ ಶೇ.4ರಷ್ಟು ಮೀಸಲಾತಿ ದೊರಕಲಿದೆ. ಅದೇ ರೀತಿ ಕೇಂದ್ರದ ಅಂಗವಿಕಲ ವ್ಯಕ್ತಿಗಳ ಹಕ್ಕುಗಳ ಕಾಯ್ದೆ-2016ರಲ್ಲಿ ನಿಗದಿಪಡಿಸಲಾದ ಅಂಗವೈಕಲ್ಯತೆಯ ಮಾನದಂಡಗಳು ಮೀಸಲಾತಿಗೆ ಅನ್ವಯವಾಗಲಿದೆ.